



ಅರುಣ ಪಿ. ಭಟ್ಟ

# ವಾರಭವಿಷ್ಯ: 17.03.2022ರಿಂದ 23.03.2022ರವರೆಗೆ



**ಮೇಷ**

ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿ ಮಾಡುವ ಸಾಧ್ಯತೆ. ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಮಕ್ಕಳ ಜೊತೆ ಬಾಂಧವ್ಯ ಉತ್ತಮವಾಗಿರುತ್ತದೆ. ಅವರಿಗೆ ಕೆಲವು ಜವಾಬ್ದಾರಿಗಳನ್ನು ವಹಿಸಿತ್ತಿರಿ. ವ್ಯಾಪಾರ ವ್ಯವಹಾರ ಮಾಡುತ್ತಿರುವವರಿಗೆ ಉತ್ತಮ ಪ್ರಗತಿ ಇದೆ. ಶುಭದಿನ 20. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.



**ವೃಷಭ**

ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಜತೆಗೆ ಖರ್ಚನ್ನು ಕೂಡ ಕಡಿಮೆ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಉದ್ಯಮಿಗಳು, ಉದ್ಯೋಗಸ್ಥರು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ವರ್ಚಸ್ಸು, ಸ್ಥಾನಮಾನ ಕೂಡ ಇದೇ ಅವಧಿಯಲ್ಲಿ ಹೆಚ್ಚಾಗಲಿದೆ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ಶುಭದಿನ 19. ಹನುಮಾನ್ ಚಾಲಿಸ್ ಪಠಿಸಿರಿ.



**ಮಿಥುನ**

ವ್ಯಾಪಾರ ಮಾಡುತ್ತಿರುವವರಿಗೆ ಅತ್ಯುತ್ತಮವಾದ ಸಮಯ. ಆರೋಗ್ಯ ಕೂಡ ಈ ಅವಧಿಯಲ್ಲಿ ಉತ್ತಮವಾಗಿರುತ್ತದೆ. ಇದರಿಂದ ನಿಮಗೆ ಸಮಾಧಾನವಿರುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥರಿಗೆ ಮಾಡುವ ಕೆಲಸದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಹಕಾರಿ ಆಗುತ್ತದೆ. ಸಾಮಾಜಿಕ ಸ್ಥಾನಮಾನವು ಹೆಚ್ಚಾಗಲಿದೆ. ಶುಭದಿನ 21. ಗಣಪತಿಗೆ ದೂರ್ವಾರ್ಚನೆ ಮಾಡಿರಿ.



**ಕಟಕ**

ವಿದ್ಯಾರ್ಥಿಗಳ ಸಾಧನೆಗೆ ಅತ್ಯುತ್ತಮವಾದ ಅವಧಿ ಇದು. ತಂತ್ರಜ್ಞಾನ, ಸಾಹಿತ್ಯ ಹಾಗೂ ಸಿನಿಮಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಲವು ಅವಕಾಶಗಳು ಒಟ್ಟೊಟ್ಟಿಗೆ ಬರಲಿವೆ. ಜತೆಗೆ ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡದೆ ಕಡ್ಡಾಯವಾಗಿ ವೈದ್ಯರಿಂದ ಚಿಕಿತ್ಸೆ ಪಡೆದುಕೊಳ್ಳಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ಶುಭದಿನ 20. ಶಿವಕವಚ ಪಠಣ ಮಾಡಿರಿ.



**ಸಿಂಹ**

ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಬಹಳ ಶ್ರಮ ಹಾಕುತ್ತೀರಿ. ಹಣ ಹೂಡಿಕೆ ವ್ಯವಹಾರದಲ್ಲಿ ನಿಮ್ಮ ಸ್ಥಾನಮಾನಕ್ಕೆ ಧಕ್ಕೆ ಆಗುವ ಸಾಧ್ಯತೆ ಇದೆ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಕೈಕೊಡುವ ಸಾಧ್ಯತೆ ಇದೆ. ತಾಂತ್ರಿಕ ಶಿಕ್ಷಣ ಪಡೆಯುತ್ತಿರುವವರಿಗೆ ಪ್ರಗತಿ ಕಾಣುತ್ತೀರಿ. ಶುಭದಿನ 19. ಲಿಂಗಾಷ್ಟಕ ಪಠಿಸಿರಿ.



**ಕನ್ಯಾ**

ವಾರದ ಆರಂಭದಿಂದಲೇ ವ್ಯಾಪಾರದಲ್ಲಿ ನಿಮ್ಮ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಭೂಮಿ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ಧಾರ್ಮಿಕ ಕೆಲಸ ಕಾರ್ಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿ ಪಾಳಯದವರು ಬಹಳ ಪ್ರಯತ್ನ ಪಡುತ್ತಾರೆ. ಶುಭದಿನ 19. ಚಂಡಿ ಪಾರಾಯಣ ಮಾಡಿರಿ.



**ತುಲಾ**

ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಏನೂ ಕೊರತೆ ಇರುವುದಿಲ್ಲ. ಉದ್ಯೋಗ ಹಾಗೂ ಆರೋಗ್ಯದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ಶುಭದಿನ 18. ಸೌಂದರ್ಯ ಲಹರಿ ಪಠಿಸಿರಿ.



**ವೃಶ್ಚಿಕ**

ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ವಾರದ ಆರಂಭದಲ್ಲಿ ಅದ್ಭುತವಾದ ಯಶಸ್ಸು ದೊರೆಯುವ ಅವಕಾಶಗಳಿವೆ. ಕ್ರೀಡೆ, ಸಿನಿಮಾ ಸಂಗೀತ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗೌರವಯುತವಾದ ಸ್ಥಾನಮಾನ ದೊರೆಯಲಿದೆ. ಹಲವು ಘಟನೆಗಳು ನೀವು ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಶುಭದಿನ 22. ಶ್ರೀ ರಾಮರಕ್ಷಾ ಸ್ತೋತ್ರ ಪಠಿಸಿರಿ.



**ಧನಸ್ಸು**

ವಾರದ ಆರಂಭದಲ್ಲೇ ಶುಭ ಸುದ್ದಿ ಕೇಳಲಿದ್ದೀರಿ. ಶುಭ ಕಾರ್ಯಕ್ರಮಗಳು ನಡೆಯಲಿವೆ. ಆರೋಗ್ಯವು ಉತ್ತಮವಾಗಿರಲಿದೆ. ಈ ಹಿಂದಿನ ದೈಹಿಕ ಸಮಸ್ಯೆಗಳು ನಿವಾರಣೆಯಾಗಲಿವೆ. ಆತ್ಮವಿಶ್ವಾಸ– ಸಕಾರಾತ್ಮಕ ಆಲೋಚನೆ ವೃದ್ಧಿಯಾಗಲಿದೆ. ದೈನಂದಿನ ವ್ಯವಹಾರಗಳಲ್ಲಿ ಯಾವುದೇ ಬದಲಾವಣೆ ಮಾಡಿಕೊಳ್ಳದೆ ಮುಂದುವರಿಯಿರಿ. ಶುಭದಿನ 19. ಸುಬ್ರಹ್ಮಣ್ಯ ಜಪ ಗೋಪೂಜೆ ಮಾಡಿರಿ.



**ಮಕರ**

ಹೂಡಿಕೆ ಮಾಡಿದ್ದನ್ನು ಈಗ ಬಳಸಿಕೊಳ್ಳಲು ಮುಂದಾಗಲಿದ್ದೀರಿ. ಕೋರ್ಟ್ ವ್ಯವಹಾರಗಳು ನಿಮ್ಮ ಪರ ಆಗುವ ಸಾಧ್ಯತೆ. ಉದ್ಯಮದಲ್ಲಿ ಉನ್ನತ ಸ್ಥಾನವನ್ನು ತಲುಪಿಕೊಳ್ಳುವ ನಿಟ್ಟಿನಲ್ಲಿ ಮುಖ್ಯವಾದ ತೀರ್ಮಾನ ಕೈಗೊಳ್ಳಲಿದ್ದೀರಿ. ನಿಮ್ಮ ಗುರಿಯನ್ನು ನಿರ್ಧರಿಸುವ ಕಡೆಗೆ ಗಮನ ಕೇಂದ್ರೀಕರಿಸುತ್ತೀರಿ. ಉದ್ಯೋಗ ಸ್ಥಳದಲ್ಲಿ ನಿರೀಕ್ಷಿತ ಯಶಸ್ಸು. ಶುಭದಿನ 20. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.



**ಕುಂಭ**

ಆರ್ಥಿಕ ಪ್ರಗತಿ ಸಾಧಿಸಲು ಉತ್ತಮ ಅವಕಾಶಗಳಿವೆ. ಬೌದ್ಧಿಕ ಮತ್ತು ದೈಹಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಅದೃಷ್ಟ ಪರೀಕ್ಷೆ ಮಾಡಬಹುದು. ಜತೆಗೆ ಪ್ರಾಮಾಣಿಕ ಪರಿಶ್ರಮವೂ ಹಾಕಿದರೆ ಯಶಸ್ಸು ದೊರೆಯುವ ಅವಕಾಶ ಹೆಚ್ಚಾಗಿದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಸಿಗಲಿದೆ. ಕೆಲವರಿಗೆ ವಿದೇಶ ಪ್ರಯಾಣ ಯೋಗ ಕೂಡ ಇದೆ. ಶುಭದಿನ 21. ಕನಕಧಾರಾ ಸ್ತೋತ್ರ ಪಠಿಸಿರಿ.



**ಮೀನ**

ವೃತ್ತಿಯಲ್ಲಿ ಹಾಕುವ ಪರಿಶ್ರಮಕ್ಕೆ ತಕ್ಕಂತೆ ಫಲಿತಾಂಶ ನಿಮಗೆ ದೊರೆಯಲಿದೆ. ಉದ್ಯೋಗ ಸಂದರ್ಶನದಲ್ಲಿ ಈ ಸಮಯದಲ್ಲಿ ನಿಮ್ಮ ಪಾಲಿಗೆ ಯಶಸ್ಸು ಸಿಗಲಿದೆ. ನೀವು ಈಗಾಗಲೇ ಮಾಡಿದ ಒಳ್ಳೆ ಕೆಲಸಕ್ಕೆ ಮೆಚ್ಚುಗೆ, ಮನ್ನಣೆ, ಪುರಸ್ಕಾರಗಳು ಲಭಿಸಲಿವೆ. ಕೌಟುಂಬಿಕ ಜೀವನ ಆರಾಮವಾಗಿ ಇರುತ್ತದೆ. ಲೌಕಿಕ ವ್ಯವಹಾರಗಳಲ್ಲಿ ಸಂತೃಪ್ತಿಯನ್ನು ಅನುಭವಿಸಲಿದ್ದೀರಿ. ಶುಭದಿನ 18. ದೇವಿ ಪಾರಾಯಣ ಮಾಡಿರಿ.